# ಕೋವಿಡ್ ತಡೆಗೆ ಕಠಿಣ ನಿರ್ಬಂಧ

## ಮೇ ಮೊದಲ ವಾರದಲ್ಲಿ ಗರಿಷ್ಠ ಸಾಧ್ಯತೆ • ಎರಡನೇ ಅಲೆಯ ನಿಯಂತ್ರಣಕ್ಕೆ ಭಾರಿ ಪ್ರಯತ್ನ

ಪ್ರಜಾವಾಣಿ ವಾರ್ತೆ 12-4-21


**ಬೆಂಗಳೂರು:** ಕೋವಿಡ್ ಎರಡನೇ ಅಲೆ ರಾಜ್ಯದಲ್ಲಿ ಮೇ ಮೊದಲ ವಾರದ ವೇಳೆಗೆ ಗರಿಷ್ಠ ಮಟ್ಟ ತಲುಪುವ ಸಾಧ್ಯತೆ ಇದೆ ಎಂದು ರಾಜ್ಯ ಮಟ್ಟದ ಕೋವಿಡ್ ತಾಂತ್ರಿಕ ಸಲಹಾ ಸಮಿತಿ ಮತ್ತು ವಿಷನ್ ಗ್ರೂಪ್ ತಜ್ಞರು ಅಂದಾಜು ಮಾಡಿದ್ದಾರೆ.

ಆರೋಗ್ಯ ಸಚಿವ ಡಾ.ಕೆ. ಸುಧಾಕರ್ ಕೋವಿಡ್ ತಾಂತ್ರಿಕ ಸಲಹಾ ಸಮಿತಿ ಹಾಗೂ ವಿಷನ್ ಗ್ರೂಪ್ ಸದಸ್ಯರ ಜತೆ ಭಾನುವಾರ ಸಭೆ ನಡೆಸಿ, ಸೋಂಕು ನಿಯಂತ್ರಣ ಕುರಿತು ಚರ್ಚಿಸಿದರು. ಎರಡನೇ ಅಲೆಯ ಚಲನೆಯ ಕುರಿತ ಅಂದಾಜುಗಳಿಗೆ ಸಂಬಂಧಿಸಿದ ಮಾಹಿತಿಗಳನ್ನು ತಜ್ಞರು ಸಚಿವರೊಂದಿಗೆ ಹಂಚಿಕೊಂಡರು.



ಕೆ.ಸುಧಾಕರ್

ಸಭೆಯ ಬಳಿಕ ಮಾಧ್ಯಮ ಪ್ರತಿನಿಧಿಗಳ ಜತೆ ಮಾತನಾಡಿದ ಸುಧಾಕರ್, 'ಕೋವಿಡ್‌ನ ಪ್ರತಿ ಅಲೆ 180 ದಿನಗಳ ಕಾಲ ಇರುತ್ತದೆ. ರಾಜ್ಯದಲ್ಲಿ ಎರಡನೇ ಅಲೆ ಮೇ ಮೊದಲ ವಾರದ ವೇಳೆಗೆ ಗರಿಷ್ಠ ಮಟ್ಟ ತಲುಪಿ, ಮೇ ಕೊನೆಯ ವಾರದ ವೇಳೆಗೆ ಪ್ರಕರಣಗಳ ಸಂಖ್ಯೆ ಇಳಿಮುಖವಾಗಬಹುದು ಎಂದು ತಜ್ಞರು ಅಂದಾಜಿಸಿದ್ದಾರೆ. ಎರಡನೇ ಅಲೆಯು ಗರಿಷ್ಠ ಹಂತವನ್ನು ತಲುಪಿದಾಗ ಅನುಸರಿಸಬೇಕಾದ ಕ್ರಮಗಳ ಕುರಿತೂ ತಜ್ಞರ ಜತೆ ಸಮಾಲೋಚನೆ ನಡೆಸಲಾಗಿದೆ' ಎಂದರು.



5ನೇ ಪುಟ ನೋಡಿ

**ರಾಜ್ಯ ಕೋವಿಡ್ ಅಂಕಿ–ಅಂಶ**

| | |
|---|---|
| 10,65,290 | ಒಟ್ಟು ಸೋಂಕಿತರು (10,55,040 ನಿನ್ನೆಯ ವಿವರ) ▲ |
| 69,225 | ಸಕ್ರಿಯ ಪ್ರಕರಣಗಳು ▲ |
| 9,83,157 | ಗುಣಮುಖರಾದವರು ▲ |
| 12,889 | ಒಟ್ಟು ಸಾವು ▼ |
| ಹೊಸ ಪ್ರಕರಣ | 10,250 ▲ |
| ಗುಣಮುಖ | 2,638 ▼ |
| ಸಾವು | 40 ▲ |
| 440 | ಐಸಿಯುನಲ್ಲಿ ಇರುವವರು |

ಆಧಾರ: ರಾಜ್ಯ ಆರೋಗ್ಯ ಇಲಾಖೆ
ಪ್ರಜಾವಾಣಿ ಗ್ರಾಫಿಕ್ಸ್

## ಮೈಕ್ರೊ ಕಂಟೈನ್‌ಮೆಂಟ್ ವಲಯ: ಮೋದಿ ಕರೆ

**ನವದೆಹಲಿ:** ದೇಶದಲ್ಲಿ ಕೋವಿಡ್ ಪ್ರಕರಣಗಳು ಹೆಚ್ಚುತ್ತಿದ್ದು, ಸೋಂಕು ಪ್ರಸರಣ ತಡೆಗೆ ಜನರು ತಮ್ಮ ನಡುವೆಯೇ 'ಮೈಕ್ರೊ ಕಂಟೈನ್‌ಮೆಂಟ್ ವಲಯ' ರಚಿಸಿಕೊಳ್ಳುವಂತೆ ಪ್ರಧಾನಿ ನರೇಂದ್ರ ಮೋದಿ ಅವರು ಕರೆ ನೀಡಿದರು.



ಏಪ್ರಿಲ್ 11ರಿಂದ 14ರವರೆಗೆ ಲಸಿಕಾ ಹಬ್ಬ 'ಟೀಕಾ ಉತ್ಸವ'ದ ಅಂಗವಾಗಿ ಅವರು ಮಾತನಾಡಿದರು. ಭಾನುವಾರ ಈ ಅಭಿಯಾನಕ್ಕೆ ಚಾಲನೆ ನೀಡಲಾಯಿತು. 'ತಮ್ಮ ಸಮೀಪದಲ್ಲಿ ಯಾರಾದರೂ ಸೋಂಕಿಗೆ ಒಳಗಾದರೆ, ಕುಟುಂಬಗಳು ಮತ್ತು ಸಮಾಜದ ಸದಸ್ಯರು ತಮ್ಮ ನಡುವೆಯೇ ಕಂಟೈನ್‌ಮೆಂಟ್ ವಲಯ ರಚಿಸಿಕೊಳ್ಳುವ ಮೂಲಕ ಪ್ರಸರಣ ತಡೆಯಬಹುದು. ಭಾರತದಂತಹ ಜನನಿಬಿಡ ದೇಶದಲ್ಲಿ ಸೋಂಕಿನ ವಿರುದ್ಧ ಹೋರಾಡಲು ಇದೊಂದು ಪ್ರಮುಖ ಮಾರ್ಗವಾಗಿದೆ' ಎಂದು ಹೇಳಿದರು.

'ಮೈಕ್ರೊ ಕಂಟೈನ್‌ಮೆಂಟ್ ವಲಯದ ಬಗ್ಗೆ ನಾವೆಷ್ಟು ಜಾಗೃತರಾಗಿದ್ದೇವೆ ಎಂಬುದರ ಮೇಲೆ ಅದರ ಯಶಸ್ಸು ನಿಂತಿದೆ. ಅಗತ್ಯವಿದ್ದರೆ ಮಾತ್ರ ಮನೆಯಿಂದ ಹೊರಹೋಗುವುದು, ಅರ್ಹರು ಲಸಿಕೆ ಪಡೆದುಕೊಳ್ಳುವುದು, ಕೋವಿಡ್ ಮಾರ್ಗಸೂಚಿಗಳನ್ನು ನಿಷ್ಠೆಯಿಂದ ಪಾಲಿಸುವುದರ ಮೇಲೆ ಮೇಲೆ ಯಶಸ್ಸು ನಿರ್ಧಾರವಾಗುತ್ತದೆ' ಎಂದಿದ್ದಾರೆ. 'ಪ್ರತಿಯೊಬ್ಬ ವ್ಯಕ್ತಿ ಇನ್ನೊಬ್ಬ ವ್ಯಕ್ತಿಗೆ ಲಸಿಕೆ ಹಾಕಿಸಬೇಕು, ಪ್ರತಿಯೊಬ್ಬ ವ್ಯಕ್ತಿ ಮತ್ತೊಬ್ಬ ವ್ಯಕ್ತಿಗೆ ಚಿಕಿತ್ಸೆ ಕೊಡಿಸಲು ನೆರವಾಗಬೇಕು, ಪ್ರತಿಯೊಬ್ಬ ವ್ಯಕ್ತಿ ಮತ್ತೊಬ್ಬ ವ್ಯಕ್ತಿಯನ್ನು ಸೋಂಕಿನಿಂದ ರಕ್ಷಿಸಬೇಕು' – ಪ್ರತಿಯೊಬ್ಬ ನಾಗರಿಕ ಈ ಮೂರು ಜವಾಬ್ದಾರಿಗಳನ್ನು ನಿರ್ವಹಿಸಬೇಕು ಎಂದು ಮೋದಿ ಕರೆ ಕೊಟ್ಟರು.

## ಮಸ್ಕಿ ಬಿಜೆಪಿ ಅಭ್ಯರ್ಥಿ ಪ್ರತಾಪಗೌಡಗೆ ಕೋವಿಡ್

**ಮಸ್ಕಿ (ರಾಯಚೂರು):** ಮಸ್ಕಿ ವಿಧಾನಸಭಾ ಕ್ಷೇತ್ರದ ಉಪಚುನಾವಣೆಯ ಬಿಜೆಪಿ ಅಭ್ಯರ್ಥಿ ಪ್ರತಾಪಗೌಡ ಪಾಟೀಲ ಅವರಿಗೆ ಕೋವಿಡ್ ದೃಢಪಟ್ಟಿದೆ. ಸದ್ಯಕ್ಕೆ ಅವರು ಹೋಂ ಕ್ವಾರಂಟೈನ್‌ನಲ್ಲಿ ಇದ್ದಾರೆ. ಅಗತ್ಯವಿದ್ದಲ್ಲಿ ಅವರನ್ನು ಆಸ್ಪತ್ರೆಗೆ ಕರೆದೊಯ್ಯಲಾಗುವುದು ಎಂದು ಮೂಲಗಳು ತಿಳಿಸಿವೆ.



5ನೇ ಪುಟ ನೋಡಿ

## ಲಾಕ್‌ಡೌನ್‌ಗೆ ಶಿಫಾರಸು?

'ಆರ್ಥಿಕ ಚಟುವಟಿಕೆಗೆ ಯಾವುದೇ ರೀತಿಯ ತೊಂದರೆ ಆಗದಂತೆ ನಿರ್ಬಂಧಗಳನ್ನು ಜಾರಿಗೊಳಿಸಬೇಕು ಎಂಬುದಾಗಿ ತಜ್ಞರು ಸಲಹೆ ನೀಡಿದ್ದಾರೆ. ಆದರೆ, ಗುಂಪು ಸೇರುವುದಕ್ಕೆ ಕಡಿವಾಣ ಹಾಕದಿದ್ದರೆ ಪರಿಸ್ಥಿತಿ ಹದಗೆಡುತ್ತದೆ ಎಂಬ ಎಚ್ಚರಿಕೆಯನ್ನೂ ನೀಡಿದ್ದಾರೆ' ಎಂದು ಸಚಿವ ಡಾ.ಕೆ. ಸುಧಾಕರ್ ತಿಳಿಸಿದರು. 'ಲಾಕ್‌ಡೌನ್‌ಗೆ ಶಿಫಾರಸು ಮಾಡಲಾಗಿದೆಯೆ?' ಎಂಬ ಪ್ರಶ್ನೆಗೆ ನೇರ ಉತ್ತರ ನೀಡಲು ನಿರಾಕರಿಸಿದ ಅವರು, 'ಈಗ ನನ್ನಿಂದ ಏಕೆ ಈ ಮಾತು ಹೇಳಿಸುತ್ತಿದ್ದೀರಿ. ವರದಿ ಬಂದ ಬಳಿಕ ಚರ್ಚಿಸಿ, ತೀರ್ಮಾನಕ್ಕೆ ಬರಲಾಗುವುದು. ಜಾತ್ರೆ, ಸಮಾರಂಭಗಳ ನಿಷೇಧಕ್ಕೆ ತಜ್ಞರು ಸಲಹೆ ಮಾಡಿದ್ದಾರೆ' ಎಂದರು.

# ಕೋವಿಡ್ ತಡೆಗೆ ಕಠಿಣ ನಿರ್ಬಂಧ

ಒಂದನೇ ಪುಟದಿಂದ

ಪ್ರಕರಣಗಳ ಸಂಖ್ಯೆಯಲ್ಲಿ ಹೆಚ್ಚಳವಾದರೆ ಸೋಂಕಿತರ ಚಿಕಿತ್ಸೆಗೆ ಆಸ್ಪತ್ರೆಗಳಲ್ಲಿ ಹೆಚ್ಚಿನ ಹಾಸಿಗೆಗಳನ್ನು ಕಾಯ್ದಿರಿಸಬೇಕಾಗುತ್ತದೆ. ಮನೆಗಳಲ್ಲಿ ಪ್ರತ್ಯೇಕ ವಾಸದಲ್ಲಿರುವವರ ಮೇಲೆ ನಿಗಾ ಇಡುವುದಕ್ಕೂ ವಿಶೇಷ ವ್ಯವಸ್ಥೆ ಅಗತ್ಯ. ನಗರಗಳಿಂದ ಹಳ್ಳಿಗಳಿಗೆ ಹೆಚ್ಚಿನ ಜನರು ಮರಳುತ್ತಿದ್ದು, ಅವರ ಮೂಲಕ ಸೋಂಕು ಪ್ರಸರಣವಾಗುವ ಅಪಾಯವೂ ಇದೆ. ಈ ಬಗ್ಗೆಯೂ ನಿಗಾ ಇಡಬೇಕಿದೆ. ಅಂತರ ರಾಜ್ಯ ಪ್ರಯಾಣಿಕರು ರಾಜ್ಯ ಪ್ರವೇಶಿಸುವ ಸಮಯದಲ್ಲಿ ಕಟ್ಟುನಿಟ್ಟಿನ ಪರಿಶೀಲನೆಗೂ ಕ್ರಮ ಕೈಗೊಳ್ಳಲಾಗಿದೆ ಎಂದು ಸುಧಾಕರ್ ವಿವರಿಸಿದರು.

**ಕಠಿಣ ನಿರ್ಬಂಧಕ್ಕೆ ಸಲಹೆ:** ಕೋವಿಡ್ ಪ್ರಕರಣಗಳ ಸಂಖ್ಯೆ ತೀವ್ರಗತಿಯಲ್ಲಿ ಏರಿಕೆ ಆಗುತ್ತಿರುವುದರಿಂದ ಇನ್ನಷ್ಟು ಕಠಿಣ ನಿರ್ಬಂಧಗಳನ್ನು ಜಾರಿಗೊಳಿಸುವಂತೆ ಕೋವಿಡ್ ನಿಯಂತ್ರಣ ತಾಂತ್ರಿಕ ಸಲಹಾ ಸಮಿತಿ ಹಾಗೂ ವಿಷನ್ ಗ್ರೂಪ್‌ನ ತಜ್ಞರು ಸಲಹೆ ನೀಡಿದ್ದಾರೆ. ಈ ಕುರಿತು ಅಧಿಕೃತವಾಗಿ ವರದಿ ನೀಡುವಂತೆ ಕೋರಲಾಗಿದೆ ಎಂದು ತಿಳಿಸಿದರು.

'ಕೋವಿಡ್ ಎರಡನೇ ಅಲೆಯ ಅಪಾಯಗಳನ್ನು ತಪ್ಪಿಸಲು ನಗರಗಳಲ್ಲಿ ರಾತ್ರಿ ಕರ್ಫ್ಯೂ ವಿಧಿಸಿರುವುದರ ಜತೆಗೆ ಇನ್ನೂ ಕೆಲವು ಕಠಿಣ ನಿರ್ಬಂಧಗಳನ್ನು ವಿಧಿಸಬೇಕು ಎಂದು ತಜ್ಞರು ಸಲಹೆ ನೀಡಿದ್ದಾರೆ. ಏನೆಲ್ಲಾ ಕ್ರಮಗಳ ಅಗತ್ಯವಿದೆ ಎಂಬುದನ್ನು ಸ್ಪಷ್ಟವಾಗಿ ವರದಿಯ ರೂಪದಲ್ಲಿ ಸಲ್ಲಿಸುವಂತೆ ತಜ್ಞರನ್ನು ಕೋರಿದ್ದೇನೆ' ಎಂದರು.

ತಾಂತ್ರಿಕ ಸಲಹಾ ಸಮಿತಿ ಮತ್ತು ವಿಷನ್ ಗ್ರೂಪ್‌ನ ತಜ್ಞರು ನೀಡುವ ವರದಿಯನ್ನು ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರಿಗೆ ಸಲ್ಲಿಸಲಾಗುವುದು. ಸಂಪುಟದ ಎಲ್ಲ ಸದಸ್ಯರ ಜತೆಗೂ ಚರ್ಚಿಸಿ ಮುಂದಿನ ಕ್ರಮಗಳ ಕುರಿತು ನಿರ್ಧಾರಕ್ಕೆ ಬರಲಾಗುವುದು ಎಂದು ತಿಳಿಸಿದರು.

ಕಳೆದ ಬಾರಿಯಂತೆ ಕೋವಿಡ್ ನಿಯಂತ್ರಣಕ್ಕೆ ಖಾಸಗಿ ಆಸ್ಪತ್ರೆಗಳಿಗೆ ಸರ್ಕಾರದಿಂದಲೇ ರಿಯಾಯಿತಿ ದರದಲ್ಲಿ ಔಷಧಿ ಒದಗಿಸಲು ನಿರ್ಧರಿಸಲಾಗಿದೆ. ಟೆಲಿ ತೀವ್ರ ನಿಗಾ ಘಟಕ (ಟೆಲಿ ಐಸಿಯು) ವ್ಯವಸ್ಥೆಯನ್ನು ಮತ್ತಷ್ಟು ಬಲಪಡಿಸಲು ತೀರ್ಮಾನಿಸಲಾಗಿದೆ ಎಂದರು.

## ಲಸಿಕೆ: ಮಹಿಳೆಯರೇ ಮುಂದು

ರಾಜ್ಯದಲ್ಲಿ ಈವರೆಗೆ 61 ಲಕ್ಷ ಡೋಸ್ ಕೋವಿಡ್ ಲಸಿಕೆ ನೀಡಿದ್ದು, ಹೆಚ್ಚಿನ ಸಂಖ್ಯೆಯಲ್ಲಿ ಲಸಿಕೆ ಪಡೆದ ಮಹಿಳೆಯರೇ ಮಾದರಿಯಾಗಿದ್ದಾರೆ ಎಂದು ಡಾ.ಕೆ.ಸುಧಾಕರ್ ಹೇಳಿದರು.

ಅಟಲ್ ಬಿಹಾರಿ ವಾಜಪೇಯಿ ಮೆಡಿಕಲ್ ಕಾಲೇಜಿನಲ್ಲಿ ನಡೆದ ಲಸಿಕೋತ್ಸವ ಸಮಾರಂಭದಲ್ಲಿ ಮಾತನಾಡಿದ ಸಚಿವರು, ರಾಜ್ಯಕ್ಕೆ 72 ಲಕ್ಷಕ್ಕೂ ಹೆಚ್ಚು ಲಸಿಕೆ ಬಂದಿದೆ. ಶೇ 53 ರಷ್ಟು ಡೋಸ್‌ಗಳನ್ನು ಮಹಿಳೆಯರಿಗೆ ನೀಡಲಾಗಿದೆ ಎಂದರು.

## ಮಸ್ಕಿ ಬಿಜೆಪಿ ಅಭ್ಯರ್ಥಿ ಪ್ರತಾಪಗೌಡಗೆ ಕೋವಿಡ್

ಒಂದನೇ ಪುಟದಿಂದ...

'ಮಾನ್ಯ ಮತದಾರ ಬಂಧುಗಳಲ್ಲಿ ನನ್ನ ಕಳಕಳಿಯ ಮನವಿ. ನನಗೆ ಕೋವಿಡ್ ಪಾಸಿಟಿವ್ ಬಂದ ಕಾರಣ ವೈದ್ಯರ ಸಲಹೆ ಮೇರೆಗೆ ಪ್ರತ್ಯೇಕವಾಗಿ ಇದ್ದೇನೆ. ಯಾರೂ ಆತಂಕ ಪಡಬೇಕಿಲ್ಲ. ಶೀಘ್ರ ಗುಣಮುಖನಾಗಿ ಬರುತ್ತೇನೆ. ಏ.17 ರಂದು ಮತದಾನ ಇದ್ದು, ನಮ್ಮ ಪಕ್ಷದ ಮುಖಂಡರು, ಕಾರ್ಯಕರ್ತರು ತಮ್ಮನ್ನು ಭೇಟಿ ಮಾಡುತ್ತಾರೆ. ಅವರನ್ನು ನಾನೇ ಎಂದು ಪರಿಭಾವಿಸಿ ಆಶೀರ್ವದಿಸಲು ಮತ್ತು ಕಮಲದ ಗುರುತಿಗೆ ಮತ ನೀಡಲು ಕೋರುತ್ತೇನೆ' ಎಂದು ಪಾಟೀಲ ಅವರು ಸಾಮಾಜಿಕ ಜಾಲತಾಣದಲ್ಲಿ ಸಂದೇಶ ಹರಿಬಿಟ್ಟಿದ್ದಾರೆ. 'ನಿಮ್ಮ ಮತ್ತು ನಿಮ್ಮ ಕುಟುಂಬದವರ ಆರೋಗ್ಯದ ಬಗ್ಗೆ ಎಚ್ಚರಿಕೆ ತೆಗೆದುಕೊಳ್ಳಲು ವಿನಂತಿಸುತ್ತೇನೆ' ಎಂದಿದ್ದಾರೆ.